**ಜೆಎಸ್‌ಎಸ್ ಮಹಾವಿದ್ಯಾಪೀಠ**
**ಶ್ರೀ ಶಿವರಾತ್ರೀಶ್ವರ ಧಾರ್ಮಿಕ ದತ್ತಿ, ಮೈಸೂರು**

ಸಹಯೋಗ
**ಮೈಸೂರು ಬಸವ ಬಳಗ ಟ್ರಸ್ಟ್**
ಪೂರ್ವ ವಲಯ, ಮೈಸೂರು

# ಶಿವಾನುಭವ ದಾಸೋಹ–333

**31 ಜನವರಿ 2026 * ಶನಿವಾರ * ಸಂಜೆ 6.00**

**ಗಣಪತಿ ದೇವಸ್ಥಾನ ಆವರಣ, ನೇತಾಜಿ ನಗರ, 1ನೇ ಹಂತ**
**ಆಲನಹಳ್ಳಿ, ಮೈಸೂರು 570 028**

---

ದಿವ್ಯಾಶೀರ್ವಾದ
**ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳು**
ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠ, ಸುತ್ತೂರು ಶ್ರೀಕ್ಷೇತ್ರ

ಅಧ್ಯಕ್ಷತೆ
**ಶ್ರೀ ಹೆಚ್.ಎಲ್. ಶಿವಬಸಪ್ಪ**
ನಿವೃತ್ತ ಡಿವೈಎಸ್‌ಪಿ, ಮೈಸೂರು

ಉಪನ್ಯಾಸ
**ಡಾ. ಕೆ.ಸಿ. ಬಸವರಾಜು**
ನಿವೃತ್ತ ಪ್ರಾಧ್ಯಾಪಕರು, ಮೈಸೂರು

**ವಿಷಯ : ಶರಣರ ವೈಚಾರಿಕ ಪರಂಪರೆ**

**ಭಜನೆ : ನೇತಾಜಿ ನಗರ ಭಜನಾ ಮಂಡಳಿ**

**ತಮಗೆಲ್ಲ ಆದರದ ಸ್ವಾಗತ**

ಪ್ರಾಯೋಜಕರು
**ಅಧ್ಯಕ್ಷರು, ಪದಾಧಿಕಾರಿಗಳು ಹಾಗೂ ಸದಸ್ಯರುಗಳು, ಮೈಸೂರು ಬಸವ ಬಳಗ ಟ್ರಸ್ಟ್**

ಸುತ್ತೂರು ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠದ 23ನೇ ಪೀಠಾಧಿಪತಿಗಳಾದ ಪರಮಪೂಜ್ಯ ಜಗದ್ಗುರು ಡಾ. ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರು ಪ್ರಸಾದನಿಲಯಗಳು ಹಾಗೂ ಶಿಕ್ಷಣಸಂಸ್ಥೆಗಳನ್ನು ಸ್ಥಾಪಿಸುವ ಮೂಲಕ ಜನತೆಯ ಸರ್ವಾಂಗೀಣ ಉನ್ನತಿಗೆ ಕಾರಣರಾದರು. ಶಿಕ್ಷಣದ ಮೂಲಕ ಸಾಮಾಜಿಕ ಅಭಿವೃದ್ಧಿ ಸಾಧ್ಯ ಎಂಬುದನ್ನು ಮನಗಂಡಿದ್ದರು. ಶ್ರೀಗಳವರು ಜಾತಿ, ಮತ, ಪಂಥ, ಧರ್ಮ ಭೇದವಿಲ್ಲದೆ ಅನ್ನದಾಸೋಹ, ಜ್ಞಾನದಾಸೋಹದ ಜೊತೆಗೆ ಜನತೆಯ ಸಮಗ್ರ ಅಭಿವೃದ್ಧಿಗಾಗಿ, ನೈತಿಕತೆ ಹಾಗೂ ಧಾರ್ಮಿಕತೆಗಳ ಪ್ರಸಾರಕ್ಕಾಗಿ, ಹಲವಾರು ದಶಕಗಳ ಹಿಂದೆಯೇ ಶರಣತತ್ತ್ವ ಪ್ರಸಾರ ಸಮಿತಿಯಂಥ ಸಂಸ್ಥೆಗಳ ಮೂಲಕ ಧರ್ಮ ದಾಸೋಹವನ್ನು ಪ್ರಾರಂಭಿಸಿದರು. 1986ರಲ್ಲಿ ಶರಣ ಸಾಹಿತ್ಯ ಪರಿಷತ್ತು ಹಾಗೂ ಶ್ರೀ ಶಿವರಾತ್ರೀಶ್ವರ ಧಾರ್ಮಿಕ ದತ್ತಿಯನ್ನು ಸ್ಥಾಪಿಸಿ ಆಧ್ಯಾತ್ಮಿಕ ಚಿಂತನೆಗೆ ಹೊಸ ಆಯಾಮವನ್ನು ನೀಡಿದರು.

ದತ್ತಿಯ ವತಿಯಿಂದ ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳವರ ದಿವ್ಯ ಸಾನ್ನಿಧ್ಯದಲ್ಲಿ ದಿನಾಂಕ 12.5.1996ರಂದು 'ಶಿವಾನುಭವ ದಾಸೋಹ' ಕಾರ್ಯಕ್ರಮವನ್ನು ಪ್ರಾರಂಭಿಸಲಾಯಿತು. ಅಂದಿನಿಂದಲೂ ಪ್ರತಿ ತಿಂಗಳ ಕೊನೆಯ ಶನಿವಾರದಂದು ಈ ಕಾರ್ಯಕ್ರಮವು ನಿರಂತರವಾಗಿ ನಡೆದುಕೊಂಡು ಬರುತ್ತಿದೆ. ಧರ್ಮ, ದರ್ಶನ, ವಚನಸಾಹಿತ್ಯ, ಧರ್ಮಗಳ ತೌಲನಿಕ ವಿವೇಚನೆ, ಜೀವನಕಲೆ ಮೊದಲಾದ ವಿಷಯಗಳನ್ನು ಕುರಿತು ಉಪನ್ಯಾಸ ಏರ್ಪಡಿಸಲಾಗುತ್ತಿದೆ.

**ಶ್ರೀ ಹೆಚ್.ಎಲ್. ಶಿವಬಸಪ್ಪನವರು** ಚಾಮರಾಜನಗರ ಜಿಲ್ಲೆ, ಗುಂಡ್ಲುಪೇಟೆ ತಾಲ್ಲೂಕು ಹೊರೆಯಾಲದವರು. ಎಂಎ ಪದವೀಧರರು. ಉಪನ್ಯಾಸಕರಾಗಿದ್ದ ಶ್ರೀಯುತರು ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ ಆಗಿ ಸರ್ಕಾರಿ ಹುದ್ದೆಗೆ ನೇಮಕಗೊಂಡು ನಂತರ ಸರ್ಕಲ್ ಇನ್ಸ್‌ಪೆಕ್ಟರ್ ಆಗಿ ಡಿವೈಎಸ್‌ಪಿಯಾಗಿ ಕಾರ್ಯನಿರ್ವಹಿಸಿ ನಿವೃತ್ತರಾಗಿರುತ್ತಾರೆ. ಕವನ, ನಾಟಕ, ವಚನ ಹನಿಗವನ, ಚುಟುಕು, ಕಥೆ ಬರೆಯುವ ಪ್ರವೃತ್ತಿಯನ್ನು ಹಾಗೂ ಪೌರಾಣಿಕ ಮತ್ತು ಸಾಮಾಜಿಕ ನಾಟಕಗಳಲ್ಲಿ ಅಭಿನಯಿಸುವ ಹವ್ಯಾಸವನ್ನು ಹೊಂದಿದ್ದಾರೆ. ಹಲವಾರು ಸಂಘ ಸಂಸ್ಥೆಗಳಿಂದ ಪ್ರಶಸ್ತಿ ಹಾಗೂ ಸನ್ಮಾನಗಳಿಗೆ ಭಾಜನರಾಗಿದ್ದಾರೆ. ಹೊರೆಯಾಲದಲ್ಲಿ 'ಗ್ರಾಮೀಣ ಸಾಂಸ್ಕೃತಿಕ ಪ್ರತಿಷ್ಠಾನ' ಸ್ಥಾಪಿಸಿ ಪ್ರತಿ ನವೆಂಬರ್ ತಿಂಗಳಿನಲ್ಲಿ ವಿದ್ಯಾರ್ಥಿಗಳಿಗಾಗಿ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸುತ್ತಾ ಬಂದಿದ್ದಾರೆ.

**ಡಾ. ಕೆ.ಸಿ. ಬಸವರಾಜುರವರು** ಹಾಸನ ಜಿಲ್ಲೆ, ಅರಕಲಗೂಡು ತಾಲ್ಲೂಕು ಕೆರೆಗೋಡಿನವರು. ಎಂಎ, ಪಿಎಚ್.ಡಿ, ಪಡೆದಿರುತ್ತಾರೆ. ಮೈಸೂರು ವಿಶ್ವವಿದ್ಯಾನಿಲಯದಲ್ಲಿ ಅರ್ಥಶಾಸ್ತ್ರ ಪ್ರಾಧ್ಯಾಪಕರಾಗಿ ವೃತ್ತಿ ಆರಂಭಿಸಿ, ಮಂಗಳೂರು ಹಾಗೂ ಕುವೆಂಪು ವಿಶ್ವವಿದ್ಯಾಲಯಗಳಲ್ಲಿ ಸೇವೆ ಸಲ್ಲಿಸಿ ನಿವೃತ್ತರಾಗಿರುತ್ತಾರೆ. ರಾಷ್ಟ್ರೀಯ, ಅಂತಾರಾಷ್ಟ್ರೀಯ ಪತ್ರಿಕೆಗಳಲ್ಲಿ ಇತರ ಲೇಖನಗಳು ಪ್ರಕಟಗೊಂಡಿವೆ. ಆರು ಕೃತಿಗಳನ್ನು ಹೊರತಂದಿದ್ದಾರೆ. ಎಂಫಿಲ್ ವಿದ್ಯಾರ್ಥಿಗಳ ಮಹಾಪ್ರಬಂಧಕ್ಕೆ ಮಾರ್ಗದರ್ಶಕರಾಗಿರುತ್ತಾರೆ. ಪಿಎಚ್‌ಡಿ ಸಂಶೋಧನಾ ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ಮಾಡಿರುತ್ತಾರೆ. ಕರ್ನಾಟಕ ರಾಜ್ಯ ರೈತ ಸಂಘದ ಸಂಸ್ಥಾಪಕರಲ್ಲಿ ಒಬ್ಬರಾಗಿದ್ದು, ಯುವ ವಿಭಾಗದ ಅಧ್ಯಕ್ಷರು ಹಾಗೂ ಹಿರಿಯ ಉಪಾಧ್ಯಕ್ಷರಾಗಿದ್ದು, ವರಿಷ್ಠ ಮಂಡಳಿಯ ಸದಸ್ಯರಾಗಿರುತ್ತಾರೆ.

**ಮೈಸೂರು ಬಸವ ಬಳಗ ಟ್ರಸ್ಟ್** (ಪೂರ್ವ ವಲಯ) ನಿರ್ದೇಶಕರು ಮತ್ತು ಸದಸ್ಯರುಗಳಾದ ಶ್ರೀ ಹೆಚ್.ಎಲ್. ಶಿವಬಸಪ್ಪ (ನಿವೃತ್ತ ಡಿವೈಎಸ್‌ಪಿ), ಶ್ರೀ ಎ.ಎಸ್. ನಾಗೇಂದ್ರ ಪ್ರಕಾಶ್ (ನಿವೃತ್ತ ಪೊಲೀಸ್ ಅಧಿಕಾರಿಗಳು), ಶ್ರೀ ಕೆ.ಜಿ. ನಿರಂಜನ್ (ಎಎಸ್‌ಐ) ಶ್ರೀ ಪಿ. ಬಸಪ್ಪ (ನಿವೃತ್ತ ಸಬ್‌ಇನ್ಸ್‌ಪೆಕ್ಟರ್), ಶ್ರೀ ಗುರುಪ್ರಸಾದ್ ಇವರುಗಳು ಕಾರ್ಯಕ್ರಮವನ್ನು ನಡೆಸಿಕೊಡಲಿದ್ದಾರೆ.